ಕರ್ನಾಟಕ ವಿಧಾನ ಸಭೆ

KARNATAKA LEGISLATIVE ASSEMBLY

Wednesday, 24th January, 1979/Magha 4, 1900 S.E.

The House met in the Assembly Chamber, Vidhana Soudha, at One of the Clock.

]MR. SPEAKER (SRI. P. VENKATARAMANA) in the chair].

Demanding Judicial Enquiry into alleged Excesses in the state.

ಶ್ರೀಮತಿ ಅನುಸೂಯ ಗಜಾನನ ಶರ್ಮ.—ಮಾನ್ಯ ಅಧ್ಯಕ್ಷರೇ, ನಮ್ಮ ರಾಜ್ಯದಲ್ಲಿ ಹೆಣ್ಣು ಮಕ್ಕಳ ಮಾನಭಂಗ ಆದರೂ ಕೂಡ ಅವರಿಗೆ ರಕ್ಷಣೆ ಸಿಕ್ಕಲಿಲ್ಲ. ಮೇಲಾಗಿ ಇಲ್ಲಿ ನಮ್ಮ ಪಕ್ಷದವರು ಆ ವಿಷಯದಲ್ಲಿ ನ್ಯಾಯಾಂಗ ವಿಚಾರಣೆ ಮಾಡಬೇಕೆಂದು ಕೇಳಿದರೂ ಕೂಡ ಅವರ ನ್ಯಾಯವಾದ ಬೇಡಿಕೆಯ ಬಗೆ ಅವಕಾಶವನ್ನು ಕಲ್ಪಿಸಿ ಕೊಟ್ಟಿಲ್ಲ. ಇನ್ನಾದರೂ ಇದಕ್ಕೆ ಅವಕಾಶ ಕಲ್ಪಿಸಿಕೊಡಬೇಕು. ನಮ್ಮ ನ್ಯಾಯವಾದ ಬೇಡಿಕೆ ಏನಿದೆ ಅದಕ್ಕೆ ಅವಕಾಶ ಮಾಡಿಕೊಡದಿದ್ದರೆ ಹೆಣ್ಣುಮಕ್ಕಳಿಗೆ ಈ ರಾಜ್ಯದಲ್ಲಿ ಯಾವ ಸ್ಥಾನಮಾನವೂ ಇಲ್ಲವೆಂದು ತಿಳಿದು ಬರುತ್ತದೆ. ಈ ಮನೆಯ ಪ್ರತಿಯೊಬ್ಬ ಸದಸ್ಯರಿಗೂ ಅಕ್ಕ ತಂಗಿಯರು ಇದ್ದಾರೆ. ರಾಜ್ಯದಲ್ಲಿ ನಮ್ಮ ಅಕ್ಕತಂಗಿಯರ ಮಾನಹಾನಿಯಾಗುತ್ತಿದೆ. ಅವರಿಗೆ ರಕ್ಷಣೆ ಕೊಡುತ್ತಾ ಇಲ್ಲ. ಈ ಬಗ್ಗೆ ಲಕ್ಷ್ಯ ಕೊಡಬೇಕು. ಈ ಬಗ್ಗೆ ನ್ಯಾಯಾಂಗ ವಿಚಾರಣೆ ಆಗಬೇಕು ಇದಕ್ಕೆ ತಾವು ಅವಕಾಶ ಮಾಡಿಕೊಡಬೇಕು.

ಅಧ್ಯಕ್ಷರು.—ಮಾನ್ಯ ಗಂಗಾಧರಪ್ಪನವರೇ, ತಾವು ತಮ್ಮ ಪ್ರಶ್ನೆಯನ್ನು ಕೇಳಿ.

ಶ್ರೀಮತಿ ಅನುಸೂಯ ಗಜಾನನ ಶರ್ಮ.—ನಾವು ಈಗ ಧರಣಿ ಮಾಡುತ್ತೇವೆ (ಈ ಸಂದರ್ಭದಲ್ಲಿ ಶ್ರೀಮತಿ ಅನುಸೂಯ ಗಜಾನನ ಶರ್ಮರವರು ಧರಣಿ ಕೂತರು. ಅವರ ಜೊತೆಯಲ್ಲಿ ಇನ್ನಿಬ್ಬರು ಮಾನ್ಯ ಸದಸ್ಯರಾದ ಶ್ರೀ ಸಿ. ಎಸ್. ಮುತ್ತಿನಪೆಂಡಿಮಠ್ ಮತ್ತು ಶ್ರೀ ಕೆ. ಎಲ್. ಶಿವಲಿಂಗೇಗೌಡರು ಧರಣಿ ಕೂತರು.)

ಅಧ್ಯಕ್ಷರು.—ತಾವು ದಯವಿಟ್ಟು ತಮ್ಮ ಸೀಟಿಗೆ ಹೋಗಿ ಕುಳಿತುಕೊಳ್ಳಿ.

ಶ್ರೀಮತಿ ಅನುಸೂಯ ಗಜಾನನ ಶರ್ಮ.—ತಾವು ನ್ಯಾಯಾಂಗ ತನಿಖೆಗೆ ಅವಕಾಶ ಮಾಡಿಕೊಡಬೇಕು ಹಾಗೂ ನಮಗೆ ರಕ್ಷಣೆ ಕೊಡಬೇಕು.

ಅಧ್ಯಕ್ಷರು.—ತಾವು ಈ ಮನೆಯ ಕಾರ್ಯಕಲಾಪಗಳಿಗೆ ಅಡ್ಡಿ ಮಾಡುವುದಾದರೆ ನಾನು ಮುಂದಿನ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ.

ಶ್ರೀ ಕೆ. ಎಲ್. ಶಿವಲಿಂಗೇಗೌಡ.—ಸ್ವಾಮಿ, ನಮ್ಮ ಸ್ನೇಹಿತರೊಬ್ಬರಿಗೆ ಏಟು ಬಿದ್ದಿದೆ. ದಯಮಾಡಿ ತಾವು ನ್ಯಾಯಾಂಗ ತನಿಖೆಗೆ ಅವಕಾಶ ಮಾಡಿಕೊಡಬೇಕು.

ಅಧ್ಯಕ್ಷರು.—ತಾವು ಈ ಮನೆಯ ನಿಯಮಗಳನ್ನು ಅನುಸರಿಸಿ ನಡೆಯಬೇಕಾಗುತ್ತದೆ. ಅದನ್ನು ಬಿಟ್ಟು ತಾವು ಪದೇಪದೇ ಈ ಸಭೆಯ ಕಾರ್ಯಕಲಾಪಗಳಿಗೆ ಅಡ್ಡಿ ಮಾಡುವುದಾದರೆ ನಾನು ಮುಂದಿನ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ. ದಯಮಾಡಿ ತಾವು ತಮ್ಮ ಸೀಟಿಗೆ ಹೋಗಿ ಕುಳಿತುಕೊಳ್ಳಿ.